ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೨೫**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೇ ಅಧಿವೇಶನ

## (ಮುಂದುವರೆದ ಉಪವೇಶನಗಳು)

**ಮಂಗಳವಾರ, ದಿನಾಂಕ: ೧೪ನೇ ನವೆಂಬರ್, ೨೦೧೭**

---

**ಸಮೂಹ – II**

೧. ಇಂಧನ ಸಚಿವರು.
೨. ಕೃಷಿ ಸಚಿವರು.
೩. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.
೪. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.
೫. ಸಹಕಾರ ಸಚಿವರು
೬. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು.
೭. ಜವಳಿ ಹಾಗೂ ಮುಜರಾಯಿ ಸಚಿವರು

---

## ಹಾಪ್‌ಕಾಮ್ಸ್ ಸಂಸ್ಥೆ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು)–**

೩೬೧ (೩೪೯೩) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾಪ್‌ಕಾಮ್ಸ್ ಸಂಸ್ಥೆಗೆ ತರಕಾರಿ, ಹಣ್ಣು ಸರಬರಾಜು ಮಾಡಿದ ರೈತರಿಗೆ ಪಾವತಿಸಬೇಕಾದ ಹಣವೆಷ್ಟು ; ಇದನ್ನು ಯಾವಾಗ ಪಾವತಿಸಲಾಗುವುದು; ಸರಬರಾಜು ಮಾಡಿದ ಎಷ್ಟು ದಿನಗಳಲ್ಲಿ ಹಣ ಪಾವತಿಸಬೇಕಾಗಿತ್ತು ; ವಿಳಂಬಕ್ಕೆ ಕಾರಣಗಳೇನು ;

(ಆ) ಹಾಪ್‌ಕಾಮ್ಸ್ ಸಂಸ್ಥೆಯಿಂದ ಸ್ವಯಂ ನಿವೃತ್ತಿ ಹೊಂದಿರುವ ನೌಕರರಿಗೆ ನೀಡಬೇಕಾದ ಗ್ರಾಚ್ಯುಟಿ ಬಾಕಿ ಎಷ್ಟು ; ಅದನ್ನು ಯಾವಾಗ ಪಾವತಿಸಲಾಗುವುದು ; ಬಾಕಿ ಇರಿಸಲು ಕಾರಣಗಳೇನು ;

(ಇ) ಹಾಪ್‌ಕಾಮ್ಸ್ ಸಂಸ್ಥೆಯಿಂದ ವಿವಿಧ ಸಂಘ ಸಂಸ್ಥೆಗಳಿಗೆ ಕೊಡಬೇಕಾಗಿರುವ ಬಾಕಿ ಹಣವೆಷ್ಟು ;

(ಈ) ಹಾಪ್ ಕಾಮ್ಸ್ ಸಂಸ್ಥೆ ಕೈಗಾರಿಕಾ ಸಹಕಾರ ಬ್ಯಾಂಕ್‌ನಲ್ಲಿ ಇರಿಸಿದ್ದ ೩ ಕೋಟಿ ರೂ. ಎಫ್.ಡಿ. ವಾಪಸ್ ಪಡೆಯಲಾಗಿದೆಯೇ ; ಹಾಗೆಯೇ ಸಂಸ್ಥೆಯು ಗೊಬ್ಬರದ ಖಾತೆಯಿಂದ ಷರತ್ತು ಬದ್ಧವಾಗಿ ಹಣ ಹಿಂಪಡೆಯಲಾಗಿದೆಯೇ;

(ಉ) ಹಾಪ್‌ಕಾಮ್ಸ್ ಸಂಸ್ಥೆಯ ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನ ಆರ್ಥಿಕ ವರ್ಷದ ಲೆಕ್ಕ ಪರಿಶೋಧನೆ ನಡೆದಿದೆಯೇ ; ಇಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು; ಸಂಸ್ಥೆಯ ಆರ್ಥಿಕ ದುಸ್ಥಿತಿಗೆ ಕಾರಣರ್ಯಾರು ; ಅವರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗಿದೆಯೇ ?

## ಸಿ.ಆರ್.ಎಫ್. ಅನುದಾನದಡಿ ಕೈಗೊಳ್ಳಲಾದ ಕಾಮಗಾರಿಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೨ (೩೫೭೭) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಹಾಗೂ ಧಾರವಾಡ ಜಿಲ್ಲೆಯಲ್ಲಿ ರಸ್ತೆಗಳ ಅಭಿವೃದ್ಧಿಗೆ ಕಳೆದ ೩ ವರ್ಷಗಳಲ್ಲಿ ಕೇಂದ್ರ ಸರ್ಕಾರ ನೀಡಿದ ಸಿ.ಆರ್.ಎಫ್. ಅನುದಾನ ಎಷ್ಟು ; (ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಆ) ಇಲ್ಲಿಯವರೆಗೆ ಎಷ್ಟು ರಸ್ತೆಗಳ ಕಾಮಗಾರಿ ಪೂರ್ಣಗೊಳಿಸಲಾಗಿದೆ ; ಎಷ್ಟು ರಸ್ತೆಗಳ ಕಾಮಗಾರಿ ಬಾಕಿ ಇವೆ ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಟೆಂಡರ್ ಕರೆಯಲಾಗಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಟೆಂಡರ್ ಕರೆಯಲು ಬಾಕಿಯಿರುವ ಕಾಮಗಾರಿಗಳು ಎಷ್ಟು ; ಟೆಂಡರ್ ಕರೆಯದಿರಲು ಕಾರಣವೇನು ; ಈ ಟೆಂಡರ್‌ನ್ನು ಯಾವ ಕಾಲಮಿತಿಯೊಳಗೆ ಕರೆಯಲಾಗುವುದು? (ಕಾಮಗಾರಿವಾರು ಟೆಂಡರ್ ಮೊತ್ತ ಹಾಗೂ ಗುತ್ತಿಗೆದಾರರ ಹೆಸರು ಸಹಿತ ವಿವರ ನೀಡುವುದು)

## ಬೀದರ್ ಜಿಲ್ಲೆಯ ಸೋಲಾರ್ ಪಾರ್ಕ್ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೩ (೩೫೫೬) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿ ಸೋಲಾರ್ ಪಾರ್ಕ್ ಸ್ಥಾಪನೆಗಾಗಿ ರೈತರಿಂದ ವಶಪಡಿಸಿಕೊಂಡ ಜಮೀನು ಎಷ್ಟು ;

(ಆ) ಇದುವರೆಗೆ ಎಷ್ಟು ಸೋಲಾರ್ ಪಾರ್ಕ್‌ನ್ನು ಸ್ಥಾಪನೆಮಾಡಲಾಗಿದೆ ; ಎಷ್ಟು ಸೋಲಾರ್ ಪಾರ್ಕ್‌ನ್ನು ಸ್ಥಾಪನೆ ಮಾಡಲು ಉದ್ದೇಶಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸ್ಥಾಪನೆ ಮಾಡಿದ ಸೋಲಾರ್ ಪಾರ್ಕ್‌ಗೆ ರೈತರಿಂದ ಪಡೆದ ಜಮೀನಿಗೆ ಪರಿಹಾರ ನೀಡಲಾದ ಘಟಕವಾರು ವಿವರ ನೀಡುವುದು ;

(ಈ) ಸೋಲಾರ್ ಪಾರ್ಕ್‌ಗಾಗಿ ಬಿಡುಗಡೆ ಮಾಡಿದ ಅನುದಾನ ಎಷ್ಟು ?

## ಬೆಂಗಳೂರಿನಿಂದ ಮಂಗಳೂರಿಗೆ ಹೋಗುವ ಹೆದ್ದಾರಿಯ ಶಿರಾಡಿಘಾಟ್ ರಸ್ತೆಯು ಹಾಳಾಗಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೬೪ (೩೪೭೪) ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರಿನಿಂದ ಮಂಗಳೂರಿಗೆ ಹೋಗುವ ಹೆದ್ದಾರಿಯ ಶಿರಾಡಿಘಾಟ್ ರಸ್ತೆಯು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಭಾಗದ ರಸ್ತೆಯನ್ನು ಸಂಪೂರ್ಣ ಕಾಂಕ್ರೀಟ್ ಮುಖಾಂತರ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಇ) ಈ ರಸ್ತೆ ನಿರ್ಮಾಣಕ್ಕಾಗಿ ಮೀಸಲಿಟ್ಟ ಹಣವೆಷ್ಟು ;

(ಈ) ರಸ್ತೆ ನಿರ್ಮಾಣ ಕಾರ್ಯವನ್ನು ಯಾವ ಕಾಲಮಿತಿಯಲ್ಲಿ ನಿರ್ಮಿಸಲು ಯೋಜಿಸಲಾಗಿದೆ ?

## ವಿಯೆಟ್ನಾಂನಿಂದ ಕರಿಮೆಣಸು ಆಮದು ಮಾಡಿಕೊಳ್ಳುತ್ತಿರುವುದರಿಂದ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೫ (೩೫೪೪) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಯೆಟ್ನಾಂನಿಂದ ಕರಿಮೆಣಸು ಆಮದು ಮಾಡಿಕೊಳ್ಳುತ್ತಿರುವುದರಿಂದ ರಾಜ್ಯದ ಕರಿಮೆಣಸು ಬೆಳಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬೆಳೆಗಾರರ ಹಿತರಕ್ಷಣೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಬೆಳೆಗಾರರ ಹಿತ ಕಾಯಲು ಸರ್ಕಾರ ಅವರಿಗೆ ವಿಶೇಷ ಸವಲತ್ತುಗಳು ಹಾಗೂ ಆರ್ಥಿಕ ಸಹಾಯಗಳನ್ನು ಒದಗಿಸುತ್ತದೆಯೇ ;

(ಈ) ವಿಯೆಟ್ನಾಂನಿಂದ ಕಳಪೆ ಗುಣಮಟ್ಟದ ಕರಿಮೆಣಸಿನ ಆಮದನ್ನು ಶಾಶ್ವತವಾಗಿ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೃಷಿ ಇಲಾಖೆಯ ಉಪಕರಣಗಳನ್ನು ರೈತರಿಗೆ ವಿತರಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೬ (೩೬೩೪) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೪ ವರ್ಷಗಳಿಂದ ಮಂಡ್ಯ ಜಿಲ್ಲೆಯಲ್ಲಿ ಕೃಷಿ ಇಲಾಖೆಯ ವತಿಯಿಂದ ಯಾವ ಯಾವ ಕೃಷಿ ಉಪಕರಣಗಳನ್ನು ರೈತರಿಗೆ ಸರಬರಾಜು ಮಾಡಲಾಗಿದೆ; (ಪೂರ್ಣ ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ಧವಸ ಧಾನ್ಯಗಳು ಮಳೆಯಿಂದ ಹಾನಿಯಾಗದಂತೆ ಸಂರಕ್ಷಿಸಲು ಟಾರ್ಪಲ್‌ಗಳನ್ನು ವಿತರಿಸಲಾಗಿದೆಯೇ ; (ಪಂಚಾಯಿತಿವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಬೆಳೆ ವಿಮೆಯನ್ನು ಮಾಡಿಸಿದ್ದರೂ ಸಹ ಕೃಷಿ ಇಲಾಖೆಯವರು ಸರಿಯಾದ ಮಾಹಿತಿ ನೀಡದೆ ರೈತರನ್ನು ಸಂಕಷ್ಟಕ್ಕೀಡು

ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ? (ಪಂಚಾಯಿತಿವಾರು ಮಾಹಿತಿ ನೀಡುವುದು)

## ಪಶುಭಾಗ್ಯ ಯೋಜನೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೭ (೩೬೧೪) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪಶುಭಾಗ್ಯ ಯೋಜನೆಯಡಿಯಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಆಯ್ಕೆ ಮಾಡಲಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಆ ಪೈಕಿ ಎಷ್ಟು ಜನರಿಗೆ ಸಾಲ/ಸಹಾಯಧನ ನೀಡಲಾಗಿದೆ ;

(ಆ) ಈ ಯೋಜನೆಗಾಗಿ ಎರಡು ಜಿಲ್ಲೆಗಳಿಗೆ ಮಂಜೂರಾಗಿರುವ ಹಣ ಎಷ್ಟು; ಬಿಡುಗಡೆಯಾಗಿರುವ ಹಣ ಎಷ್ಟು ;

(ಇ) ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ವಿಧಾನ ಪರಿಷತ್ತಿನ ಸದಸ್ಯರು ನೀಡುವ ಹೆಸರುಗಳನ್ನು ಪರಿಗಣಿಸಲಾಗುತ್ತಿದೆಯೇ ;

(ಈ) ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದವರಿಗೆ ಆದ್ಯತೆ ನೀಡಲಾಗುತ್ತಿದೆಯೇ ?

## ದೇವಸ್ಥಾನಗಳ ವ್ಯವಸ್ಥಾಪನಾ ಸಮಿತಿ ರಚಿಸುವ ಪ್ರಕ್ರಿಯೆ ಕೈಬಿಡುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೮ (೩೪೮೧) ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಹಾಗೂ ಧರ್ಮಾದಾಯ ದತ್ತಿ ಅಧಿನಿಯಮ ೨೦೦೧ ಹಾಗೂ ೨೦೧೧ರ ಕಾನೂನುಗಳ ಕುರಿತು ಸರ್ವೋಚ್ಚ ನ್ಯಾಯಾಲಯದ ಅಂತಿಮ ಆದೇಶ ಬರುವವರೆಗೆ ದೇವಸ್ಥಾನಗಳಿಗೆ ವ್ಯವಸ್ಥಾಪನಾ ಸಮಿತಿ ರಚನೆಯ ಪ್ರಕ್ರಿಯೆಯನ್ನು ತಕ್ಷಣ ಕೈಬಿಡಬೇಕೆಂದು ಒತ್ತಾಯಿಸಿ, ಸಾರ್ವಜನಿಕರು ಪ್ರತಿಭಟನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಹಿಂದೂ ಧಾರ್ಮಿಕ ಸಂಸ್ಥೆಗಳ ಹಾಗೂ ಧರ್ಮಾದಾಯ ದತ್ತಿಗಳ ನಿರ್ವಹಣೆಗೆ ರಾಜ್ಯ ಉಚ್ಛನ್ಯಾಯಾಲಯದ ಆದೇಶಾನುಸಾರ ಹಿಂದೂ ಧಾರ್ಮಿಕ ಸಂಘಟನೆಗಳ ಅಭಿಪ್ರಾಯ ಕ್ರೂಡೀಕರಿಸಿ ಸಮರ್ಪಕವಾದ ಹೊಸ ಕಾನೂನನ್ನು ಅನುಷ್ಠಾನಕ್ಕೆ ತರಲು ಸರ್ಕಾರ ಪ್ರಯತ್ನಿಸುವುದೇ ? (ವಿವರ ನೀಡುವುದು)

## ಬೆಳೆ ವಿಮೆ ಮಾಡಿದ ರೈತರ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೩೬೯ (೩೫೩೪) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೫–೧೬, ೨೦೧೬–೧೭ ಮತ್ತು ೨೦೧೭–೧೮ರವರೆಗೆ ಹಾವೇರಿ ಜಿಲ್ಲೆಯಲ್ಲಿ ಬೆಳೆ ವಿಮೆ ಮಾಡಿದ ರೈತರ ಸಂಖ್ಯೆ ಎಷ್ಟು ; ಇವರು ಬೆಳೆ ವಿಮೆಗೆ ತುಂಬಿದ ಮೊತ್ತ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈಗಾಗಲೇ ಜಿಲ್ಲೆಯಲ್ಲಿ ಎಷ್ಟು ರೈತರಿಗೆ ಬೆಳೆ ವಿಮೆಮಂಜೂರಾಗಿದೆ ; ಎಷ್ಟು ಹಣ ಮಂಜೂರಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈಗಾಗಲೇ ಎಷ್ಟು ಜನ ರೈತರ ಖಾತೆಗೆ ವಿಮಾ ಮಾಡಲಾಗಿದೆ ; ಇದರ ಹಣ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಜಿಲ್ಲೆಯ ಇನ್ನು ಎಷ್ಟು ಜನರಿಗೆ ಬೆಳೆ ವಿಮೆ ವಿತರಣೆ ಮಾಡಿರುವುದಿಲ್ಲ ; ಮಾಡದಿರಲು ಕಾರಣವೇನು ; ಇದರ ಮೊತ್ತ ಎಷ್ಟು ; ಮತ್ತು ಯಾವ ಯಾವ ಬ್ಯಾಂಕಿನಿಂದ ಯಾವಾಗ ವಿತರಣೆ ಮಾಡಲಾಗುವುದು ?

## ಬೀದರ್–ಔರಾದ್ ಎಸ್.ಹೆಚ್.–೧೫ರ ರಸ್ತೆ ತುಂಬಾ ಹಾಳಾಗಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೩೭೦ (೩೪೭೬) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್–ಔರಾದ್ ನಡುವೆ ಸಂಪರ್ಕ ಕಲ್ಪಿಸುವ ಎಸ್.ಹೆಚ್.–೧೫ರ ರಸ್ತೆ ಅಭಿವೃದ್ಧಿಗೆ ಬಿಡುಗಡೆಯಾಗಿರುವ ಹಣವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಈ ರಸ್ತೆಯು ತುಂಬಾ ಹಾಳಾಗಿ ಸಾರ್ವಜನಿಕರ ಓಡಾಟಕ್ಕೆ ತುಂಬಾ ತೊಂದರೆಯಾಗಿದ್ದು, ಇದನ್ನು ಯಾವ ಕಾಲಮಿತಿಯೊಳಗೆ ದುರಸ್ಥಿಪಡಿಸಲಾಗುವುದು ; ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳಾವುವು; (ಸಂಪೂರ್ಣ ವಿವರ ನೀಡುವುದು)

(ಇ) ಈ ರಸ್ತೆಯ ನಿರ್ವಹಣೆಯನ್ನು ಪಡೆದಿರುವ ಗುತ್ತಿಗೆದಾರರು ಯಾರು ; ಇವರುಗಳ ಸಂಪೂರ್ಣ ವಿವರ ನೀಡುವುದು ?

## ರಾಯಚೂರಿನಲ್ಲಿ ಸ್ಥಾಪಿಸಿರುವ ಆರ್.ಟಿ.ಪಿ.ಎಸ್. ಹಾಗೂ ವೈ.ಟಿ.ಪಿ.ಎಸ್. ಯೋಜನೆಗೆ ರೈತರಿಂದ ಭೂಮಿ ಸ್ವಾಧೀನಪಡಿಸಿಕೊಂಡಿರುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ (ಪದವೀಧರರ ಕ್ಷೇತ್ರ) –**

೩೭೧ (೩೬೩೦) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆಯಲ್ಲಿ ಸ್ಥಾಪಿಸಲಾಗಿರುವ ಆರ್‌ಟಿಪಿಎಸ್ ಹಾಗೂ ವೈಟಿಪಿಎಸ್ ಯೋಜನೆಗಳಿಗೆ ಸ್ವಾಧೀನಪಡಿಸಿಕೊಂಡಿರುವ ಭೂಮಿ ಎಷ್ಟು; (ಭೂಮಿ ಮಾಲೀಕರ ಹೆಸರು, ಎಕರೆವಾರು ಹಾಗೂ ಪರಿಹಾರಗಳ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಗಳಲ್ಲಿ ಭೂಮಿಯನ್ನು ಕಳೆದುಕೊಂಡ ಕುಟುಂಬಗಳಿಂದ ಅನುಕಂಪದ ಆಧಾರದ ಮೇಲೆ ಉದ್ಯೋಗಕ್ಕಾಗಿ ಬಂದ ಅರ್ಜಿಗಳೆಷ್ಟು ; ಅನುಕಂಪದ ಆಧಾರದ ಮೇಲೆ ಉದ್ಯೋಗ ಪಡೆದುಕೊಂಡ ಅಭ್ಯರ್ಥಿಗಳೆಷ್ಟು ಹಾಗೂ ಬಾಕಿ ಉಳಿದ ಅಭ್ಯರ್ಥಿಗಳ ಸಂಪೂರ್ಣ ಮಾಹಿತಿ ನೀಡುವುದು;

(ಇ) ಅನುಕಂಪದ ಆಧಾರಿತ ಅಭ್ಯರ್ಥಿಗಳಿಗೆ ಉದ್ಯೋಗ ನೀಡಲು ಸರ್ಕಾರ ಮುಂದಾಗುವುದೇ ; ಇದ್ದರೆ ಸರ್ಕಾರದ ಮುಂದಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಬೆಂಗಳೂರು – ಮೈಸೂರು ಹೆದ್ದಾರಿ ರಸ್ತೆ ಡಾಂಬರ್ ಹಾಳಾಗಿರುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೩೭೨ (೩೬೧೩) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು–ಮೈಸೂರು ಹೆದ್ದಾರಿ ರಸ್ತೆ (ಪ್ರಸ್ತುತ ಇರುವ) ಕಾಮಗಾರಿಯು ಪೂರ್ಣಗೊಂಡಿದ್ದು ಯಾವಾಗ ;

(ಆ) ಸದರಿ ರಸ್ತೆಯ ಕಾಮಗಾರಿಯನ್ನು ನಿರ್ವಹಿಸಿದ ಗುತ್ತಿಗೆದಾರರಿಗೆ ಎಷ್ಟು ವರ್ಷದವರೆಗೆ ಈ ರಸ್ತೆಯ ನಿರ್ವಹಣೆ ಮಾಡುವ ಷರತ್ತು ವಿಧಿಸಲಾಗಿತ್ತು;

(ಇ) ಪ್ರಸ್ತುತ ಈ ರಸ್ತೆಯ ಡಾಂಬರೀಕರಣ ಅಲ್ಲಲ್ಲಿ (ಮುಖ್ಯವಾಗಿ ಮಂಡ್ಯ ನಗರ ಭಾಗದಲ್ಲಿ) ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಅಲ್ಲಲ್ಲಿ ಗುಂಡಿಬಿದ್ದು ಹಾಳಾಗಿರುವ ರಸ್ತೆಗೆ ಮರು ಡಾಂಬರೀಕರಣ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ; ಯಾವಾಗ ಮಾಡಲಾಗುವುದು ;

(ಉ) ಜೊತೆಗೆ ಈ ರಸ್ತೆಯ ಅಗಲೀಕರಣ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಕೈಗೆತ್ತಿಕೊಳ್ಳಲಾಗುವುದು ಯಾವಾಗ ?

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಜವಳಿ ಕಾರ್ಖಾನೆಗಳ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭೩ (೩೫೮೦) ಜವಳಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಜವಳಿ ಕಾರ್ಖಾನೆಗಳೆಷ್ಟು ಹಾಗೂ ಮುಚ್ಚಲ್ಪಟ್ಟ ಜವಳಿ ಕಾರ್ಖಾನೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಮುಚ್ಚಲ್ಪಟ್ಟಿರುವ ಜವಳಿ ಕಾರ್ಖಾನೆಗಳ ಅಭಿವೃದ್ಧಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಜವಳಿ ಉದ್ಯಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ತ್ರೀ ಮತ್ತು ಪುರುಷರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಜವಳಿ ಕಾರ್ಖಾನೆಯಲ್ಲಿ ಇದುವರೆಗೆ ಉತ್ಪಾದನೆಯಾಗಿರುವ ಬಟ್ಟೆಯ ವಿವರ ನೀಡುವುದು ;

(ಉ) ಜವಳಿ ಉದ್ಯಮದ ಅಭಿವೃದ್ಧಿಗೆ ಅಭ್ಯರ್ಥಿಗಳ ತರಬೇತಿಗೆ ಇಲಾಖೆ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿರುವ RTPS ಮತ್ತು YTPS ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೩೭೪ (೩೫೬೩) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಾನ್ವಿ ತಾಲ್ಲೂಕು ಮಲ್ಲಟ ಗ್ರಾಮದ ಹತ್ತಿರ ನಿರ್ಮಿಸುತ್ತಿರುವ ೨೨೦ ಕೆ.ವಿ. ವಿದ್ಯುತ್ ಕೇಂದ್ರಗಳ ಕಾಮಗಾರಿಯನ್ನು ಪೂರ್ತಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಮಾನ್ವಿ ತಾಲ್ಲೂಕಿನಲ್ಲಿ ಬರುವ ಅಡವಿ ಅಮರೇಶ್ವರ ಕುರಕುಂದಾ ಅರವಿ ೧೧೦/೧೧ ಕೆವಿ ಉಪಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ತಾಲ್ಲೂಕಿನಲ್ಲಿರುವ RTPS ಮತ್ತು YTPSಗೆ ಭೂಮಿ ನೀಡಿರುವ ರೈತರುಗಳ ಬೇಡಿಕೆಯನ್ನು ಈಡೇರಿಸಲು ಕೈಗೊಂಡ ಕ್ರಮಗಳೇನು ;

(ಈ) ರಾಯಚೂರು ತಾಲ್ಲೂಕಿನ ಗ್ರಾಮಾಂತರ ಪ್ರದೇಶದ ರೈತರು ಪಂಪ್‌ಸೆಟ್‌ಗಳಿಗೆ ದಿನದ ೨೪ ಗಂಟೆ ವಿದ್ಯುತ್ ಸರಬರಾಜು ಮಾಡಲಾಗುವುದೇ ?

## ಸಹಕಾರ ಸಂಸ್ಥೆಗಳ ಕೃಷಿ ಸಾಲಮನ್ನಾ ಯೋಜನೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭೫ (೩೬೧೭) ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉಡುಪಿ ಜಿಲ್ಲೆಯ ಸಹಕಾರ ಸಂಘಗಳಲ್ಲಿ ೨೦೧೬–೧೭ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕೃಷಿ ಸಾಲವನ್ನು ಪಡೆದವರ ಸಂಖ್ಯೆ ಎಷ್ಟು ; ಅವರಲ್ಲಿ ಸರಕಾರದ ಕೃಷಿ ಸಾಲ ಮನ್ನಾ ಯೋಜನೆಯ ಪ್ರಯೋಜನ ಪಡೆದವರ ಸಂಖ್ಯೆ ಎಷ್ಟು ; (ಸಂಸ್ಥೆವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯ ಸಹಕಾರ ಸಂಘಗಳಲ್ಲಿ ಜಿಲ್ಲೆಯನ್ನು ಬರಗಾಲ ಪೀಡಿತ ಜಿಲ್ಲೆ ಎಂದು ಘೋಷಣೆ ಮಾಡಿದ ದಿನಾಂಕದಂದು ಸಹಕಾರ ಸಂಘದಲ್ಲಿ ಸಾಲ ಮಾಡಿ, ನಂತರ ಸರಕಾರದ ಕೃಷಿ ಸಾಲ ಮಾಡಿದವರ ಸಂಖ್ಯೆ ಎಷ್ಟು ; ಸರಕಾರದ ಕೃಷಿ ಸಾಲ ಮನ್ನಾ ಯೋಜನೆಯ ಪ್ರಯೋಜನ ಪಡೆದವರ ಸಂಖ್ಯೆ ಎಷ್ಟು ; (ಸಂಸ್ಥೆವಾರು ವಿವರ ನೀಡುವುದು)

(ಇ) ಸರಕಾರದಿಂದ ಕೃಷಿ ಸಾಲವನ್ನು ಘೋಷಣೆಯ ದಿನಾಂಕದ ಪೂರ್ವ ಸಾಲವನ್ನು ಮರುಪಾವತಿಸಿ ಸಾಲವನ್ನು ಪಡೆಯಲು ಸಾಧ್ಯವಾಗದವರ ಸಂಖ್ಯೆ ಎಷ್ಟು; ಇದರಲ್ಲಿ ಸಹಕಾರಿ ಸಂಸ್ಥೆಯ ಕೆಲವು ಅಧ್ಯಕ್ಷ/ಸಿಬ್ಬಂದಿಗಳ ನಿರ್ಲಕ್ಷದಿಂದಾಗಿ ರೈತರಿಗೆ ಸಾಲ ಮನ್ನಾ ಪ್ರಯೋಜನ ಸಿಗದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ; ಈ ನ್ಯೂನ್ಯತೆ ಸರಿಪಡಿಸಲು ಸರಕಾರದ ಕ್ರಮವೇನು ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ. 656, ಪ್ರತಿಗಳು 1500